**ಅಸಲು ದಾವಾ ಸಂಖ್ಯೆ-181/2014** **ಪಿ.ಡಬ್ಲ್ಯೂ:- 2**

ದಿನಾಂಕಃ **04-12-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-**

ದಾವಾ ಆಸ್ತಿಯಲ್ಲಿ ನಾವು ಸ್ವಾಧೀನದಲ್ಲಿರುವ ಬಗ್ಗೆ ನ್ಯಾಯಾಲಯಕ್ಕೆ ದಾಖಲಾತಿಗಳನ್ನು ಹಾಜರುಪಡಿಸಿದ್ದೇವೆ. ನಿಪಿ-1 ರಿಂದ 24 ದಾಖಲೆಗಳಲ್ಲಿ ವಾದಿಯ ವಾರಸುದಾರರು ಎಂಬ ಬಗ್ಗೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಸಾಕ್ಷಿಗೆ ಪ್ರತಿವಾದಿಯು ಮೂಲ ವಾದಿ ನಿಂಗರಾಜಪ್ಪರವರಿಗೆ ತೊಂದರೆ ಮಾಡಿದ್ದರು ವಿನಃ ನಿಮಗೆ ಯಾವುದೇ ತೊಂದರೆಯನ್ನು ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಮಾಡಿಲ್ಲ ಎಂದರೆ ಸಾಕ್ಷಿಯು ನಮಗೂ ತೊಂದರೆ ಮಾಡಿದ್ದಾರೆ ಎಂದು ನುಡಿಯುತ್ತಾರೆ. ವಾದ ಪತ್ರದಲ್ಲಿ ಪ್ರತಿವಾದಿಗಳು ನಮಗೆ ತೊಂದರೆ ಕೊಟ್ಟ ಬಗ್ಗೆ ನಮೂದಾಗಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಪ್ರತಿವಾದಿಗೆ ಸೇರಿದ ಆಸ್ತಿ ಎಂದರೆ ಸರಿಯಲ್ಲ. ಈಗ ದಾವಾ ಆಸ್ತಿಯಲ್ಲಿ ಯಾವುದೇ ಬೆಳೆಯನ್ನು ಬೆಳೆಯುತ್ತಿಲ್ಲ. ದಾವಾ ಆಸ್ತಿಯಲ್ಲಿ ಪ್ರತಿವಾದಿಗಳು ಸ್ವಾಧೀನದಲ್ಲಿದ್ದುಕೊಂಡು ಸಾಗುವಳಿ ಮಾಡುತ್ತಿದ್ದಾರೆ ಎಂದರೆ ಸರಿಯಲ್ಲ. ಈ ದಾವೆಯನ್ನು ಸಲ್ಲಿಸಿದ ನಂತರ ದಿನದಲ್ಲಿ ನಾವು ದಾವಾ ಆಸ್ತಿಯಲ್ಲಿ ಸ್ವಾಧೀನದಲ್ಲಿರುವ ಬಗ್ಗೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯು ಪ್ರತಿವಾದಿಗಳಿಗೆ ಸೇರಿದ್ದು ಎಂದು ಗೊತ್ತಿದ್ದರೂ ಸಹ ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನಮ್ಮ ವಿರುದ್ಧ ಶಾಶ್ವತ ನಿರ್ಭಂದಕಾಜ್ಞೆಯನ್ನು ಕೋರಿದ್ದಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ಈ ದಾವೆಯಲ್ಲಿ ನಮ್ಮ ವಿರುದ್ಧ ಶಾಶ್ವತ ನಿರ್ಭಂದಕಾಜ್ಞೆಯನ್ನು ಕೋರಿದ ವಿಚಾರ ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನ್ಯಾಯಾಲಯಕ್ಕೆ ಸಲ್ಲಿಸಿರುವ ದಾಖಲಾತಿಗಳ ಬಗ್ಗೆ ನನಗೆ

ಗೊತ್ತು. ನಮ್ಮ ಅಜ್ಜಿ ಶಾಂತಮ್ಮರವರು ದಾವಾ ಆಸ್ತಿಯನ್ನು ಮಾರಾಟ ಮಾಡಿದ್ದರಿಂದ ನನಗಾಗಲೀ, ನನ್ನ ಮಾವ ನಿಂಗರಾಜಪ್ಪರವರಿಗಾಗಲೀ ಯಾವುದೇ ಹಕ್ಕು ಮತ್ತು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನಾವು ಸ್ವಾಧೀನದಲ್ಲಿ ಇಲ್ಲದಿದ್ದರೂ ಸಹ ಪ್ರತಿವಾದಿಗಳಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.